# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE: 27/5/2020

## ಖರೀದಿ ಅಕ್ರಮ: ಲೆಕ್ಕಪತ್ರ ಸಮಿತಿ ತನಿಖೆ

ಬೆಂಗಳೂರು: ಕೋವಿಡ್ ನಿರ್ವಹಣೆಗೆಂದು ಖರೀದಿಸಿದ ವೈದ್ಯಕೀಯ ಉಪಕರಣಗಳಲ್ಲಿ ಅಕ್ರಮ ನಡೆದಿದೆ ಎಂಬ ದೂರು ಬಂದಿರುವುದರಿಂದ ತನಿಖೆ ನಡೆಸಲು ನಿರ್ಧರಿಸಿರುವುದಾಗಿ ವಿಧಾನಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ ಅಧ್ಯಕ್ಷ ಎಚ್.ಕೆ.ಪಾಟೀಲ ತಿಳಿಸಿದರು.

ಈ ಸಂಬಂಧ ಮಂಗಳವಾರ ಸಮಿತಿ ಸಭೆಯ ಬಳಿಕ ಅವರು ಸುದ್ದಿಗಾರರಿಗೆ ಈ ವಿಷಯ ತಿಳಿಸಿದರು.

ಪರೀಕ್ಷಾ ಕಿಟ್‌ಗಳು, ವೆಂಟಿಲೇಟರ್, ಗ್ಲೌಸ್, ಪಿಪಿಇ, ರ್‍ಯಾಪಿಡ್ ಟೆಸ್ಟ್ ಕಿಟ್ ಮುಂತಾದವುಗಳ ಖರೀದಿಯಲ್ಲಿ ಅವ್ಯವಹಾರ ನಡೆದಿದೆ ಎಂಬ ದೂರಿನ ಹಿನ್ನೆಲೆಯಲ್ಲಿ ಸಮಿತಿ ಸದಸ್ಯರು ಇದೇ 28 ರಂದು ವಿವಿಧ ಆಸ್ಪತ್ರೆಗಳು, ಕ್ವಾರಂಟೈನ್ ಕೇಂದ್ರಗಳು, ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ಬಸ್ ನಿಲ್ದಾಣಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ಸಂಬಂಧಪಟ್ಟ ಇಲಾಖೆಗಳಿಂದಲೂ ಮಾಹಿತಿ ಕೇಳಲಾಗಿದೆ. ವಿಧಾನ ಮಂಡಲದ ಕಾರ್ಯ ವಿಧಾನ ನಡವಳಿಕೆ 264 (1) ಅನ್ವಯ ತನಿಖೆ ನಡೆಸುವ ಅಧಿಕಾರ ಸಮಿತಿಗೆ ಇದೆ ಎಂದೂ ಪಾಟೀಲ ತಿಳಿಸಿದರು.